**Bangalore**
**Regional News**
**30.10.2025: 1840hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು:</u>

೧. ೨೦೨೫-೨೬ರ ರಾಜ್ಯೋತ್ಸವ ಪ್ರಶಸ್ತಿ ಪ್ರಕಟ; ನಟ ಪ್ರಕಾಶ್ ರಾಜ್ ಸೇರಿದಂತೆ ೭೦ ಸಾಧಕರನ್ನು ಗುರುತಿಸಿದ ಸರ್ಕಾರ

೨. ಕುಸುಮ್-ಸಿ ಮೂಲಕ ಕೃಷಿ ಪಂಪ್ ಸೆಟ್‌ಗಳಿಗೆ ಹಗಲು ವೇಳೆ ಸಮರ್ಪಕ ವಿದ್ಯುತ್ ಪೂರೈಕೆ - ಸಚಿವ ಕೆ.ಜೆ. ಜಾರ್ಜ್ ಭರವಸೆ

೩. ಭಾರತ ಮಿಲಿಟರಿ ತಂತ್ರಜ್ಞಾನಗಳಲ್ಲಿ ಸಾಮರ್ಥ್ಯ ಹೊಂದಿರುವ ಉದಯೋನ್ಮುಖ ಶಕ್ತಿ - ಡಿಆರ್‌ಡಿಒ ಮಹಾನಿರ್ದೇಶಕ ಡಾ. ಬಿ.ಕೆ. ದಾಸ್ ಅಭಿಮತ

೪. ಚಿತ್ತಾಪುರ ಆರ್‌ಎಸ್‌ಎಸ್ ಪಥಸಂಚಲನ ವಿವಾದ; ನವೆಂಬರ್ ೫ಕ್ಕೆ ಮತ್ತೊಂದು ಶಾಂತಿ ಸಭೆ ನಡೆಸಲು ಹೈಕೋರ್ಟ್ ಸೂಚನೆ

೫. ಶಾಸಕರ ಭವನದಲ್ಲಿ ಸ್ಮಾರ್ಟ್ ಲಾಕ್‌ಗಳ ಅಳವಡಿಕೆಯಲ್ಲಿ ಭ್ರಷ್ಟಾಚಾರ ಆರೋಪ; ಸಭಾಧ್ಯಕ್ಷ ಯು.ಟಿ. ಖಾದರ್ ರಾಜೀನಾಮೆಗೆ ಬಿಜೆಪಿ ಆಗ್ರಹ

****************

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯಡಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿರುವ ೫ ನಗರ ಪಾಲಿಕೆಗಳಲ್ಲಿನ ವಾರ್ಡ್‌ಗಳಲ್ಲಿ ಮೂಲ ಸೌಕರ್ಯಗಳ ಅಭಿವೃದ್ಧಿಗಾಗಿ ಒಟ್ಟು ೨ ಸಾವಿರದ ೨೯೬ ಕೋಟಿ ರೂಪಾಯಿ ಅನುದಾನ ನೀಡಲು ಒಪ್ಪಿಗೆ ನೀಡಲಾಗಿದೆ. ರಸ್ತೆಗಳ ಡಾಂಬರೀಕರಣ ಕಾಮಗಾರಿ ಕೈಗೊಳ್ಳಲು ಒಂದು ಸಾವಿರದ ೨೪೧ ಕೋಟಿ ರೂಪಾಯಿ ಅಂದಾಜು ಮೊತ್ತದಲ್ಲಿ ಕ್ರಿಯಾಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಒಂದು ಸಾವಿರದ ೫೫ ಕೋಟಿ ರೂಪಾಯಿ ಹೆಚ್ಚುವರಿ ಅನುದಾನ ನೀಡಲು ಸಂಪುಟ ಒಪ್ಪಿಗೆ ಸೂಚಿಸಿದೆ.

****************

೨೦೨೫-೨೬ನೇ ಸಾಲಿನ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪ್ರಕಟವಾಗಿದೆ. ಈ ಬಾರಿ ಬಹುಭಾಷಾ ನಟ ಪ್ರಕಾಶ್ ರಾಜ್ ಸೇರಿದಂತೆ ೭೦ ಸಾಧಕರನ್ನು ಸರ್ಕಾರ ಗುರುತಿಸಿದೆ. ಬೆಂಗಳೂರಿನಲ್ಲಿಂದು ಪ್ರಶಸ್ತಿಯ ಪಟ್ಟಿಯನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಬಿಡುಗಡೆ ಮಾಡಿದರು. ಈ ಪ್ರಶಸ್ತಿಯು ೫ ಲಕ್ಷ ನಗದು ಬಹುಮಾನ ಹಾಗೂ ೨೫ ಗ್ರಾಂ ಚಿನ್ನದ ಗ್ರಾಂ ಪದಕಗಳನ್ನೊಳಗೊಂಡಿದೆ. ಈ ವೇಳೆ ಮಾತನಾಡಿದ ಸಚಿವ ಶಿವರಾಜ್ ತಂಗಡಗಿ ಈ ಬಾರಿ ಯಾವುದೇ ಸಂಘ ಸಂಸ್ಥೆಗಳಿಗೆ ಪ್ರಶಸ್ತಿ ನೀಡಿಲ್ಲ. ಈ ಬಾರಿ ೧೨ ಮಂದಿ ಮಹಿಳೆಯರನ್ನು ಪ್ರಶಸ್ತಿಗಾಗಿ ಆಯ್ಕೆ ಮಾಡಲಾಗಿದೆ.

****************

ನಗರೀಕರಣವು ಭಾರತದ ವೇಗವಾಗಿ ಬೆಳೆಯುತ್ತಿರುವ ಆರ್ಥಿಕ ಪರಿವರ್ತನೆಯ ಪ್ರಮುಖ ಆಯಾಮವಾಗಿದೆ ಎಂದು ಕೇಂದ್ರ ನಗರಾಭಿವೃದ್ಧಿ ಸಚಿವ ಮನೋಹರ ಲಾಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ದಕ್ಷಿಣ ರಾಜ್ಯಗಳ ನಗರಾಭಿವೃದ್ಧಿ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ನಡೆದ ಪ್ರಾದೇಶಿಕ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರೀಕರಣ ಇಂದು ದೇಶದ ಅತಿ ದೊಡ್ಡ ಸವಾಲುಗಳಲ್ಲಿ ಒಂದಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಸಭೆಯಲ್ಲಿ ಬೆಂಗಳೂರಿನ ನಗರ ಯೋಜನೆ, ಸಾರಿಗೆ ವ್ಯವಸ್ಥೆ, ನೀರು ಮತ್ತು ಒಳಚರಂಡಿ ಸೇವೆಗಳು, ಸ್ವಚ್ಛತೆ, ಮೆಟ್ರೋ ಯೋಜನೆಗಳು ಮುಂತಾದ ವಿಷಯಗಳ ಬಗ್ಗೆ ಚರ್ಚೆ ನಡೆದಿದೆ ಎಂದು ತಿಳಿಸಿದ್ದಾರೆ.

****ಧ್ವನಿ***ಮನೋಹರ್ ಲಾಲ್

ಕೆಲ ರಾಜ್ಯಗಳಿಗೆ ಬಾಕಿ ಉಳಿದ ‘೧೫ನೇ ಹಣಕಾಸು ಆಯೋಗದ ಅನುದಾನಗಳನ್ನು ಮೊತ್ತವನ್ನು ಶೀಘ್ರದಲ್ಲೇ ಬಿಡುಗಡೆ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

****************

ಟನಲ್ ರಸ್ತೆ, ಮೇಲ್ಸೇತುವೆ ಯೋಜನೆ, 'ಬಿ' ಖಾತೆಯಿಂದ 'ಎ' ಖಾತೆ ನೀಡುವ ಯೋಜನೆ ಬಗ್ಗೆ ಕೇಂದ್ರ ನಗರಾಭಿವೃದ್ಧಿ ಸಚಿವ ಮನೋಹಲ್ ಲಾಲ್ ಖಟ್ಟರ್ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ದಕ್ಷಿಣ ಭಾರತ ರಾಜ್ಯಗಳ ನಗರಾಭಿವೃದ್ಧಿ ಸಚಿವರ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆದರೆ ಸಚಿವರು ಯಾವುದೇ ಹಣ ಬಿಡುಗಡೆ ಬಗ್ಗೆ ಭರವಸೆ ನೀಡಿಲ್ಲ" ಎಂದು ಹೇಳಿದ್ದಾರೆ. ೧೬ನೇ ಹಣಕಾಸು ಯೋಜನೆ ಅನ್ವಯ ಅನುದಾನದಕ್ಕಾಗಿ ಬೇಡಿಕೆ ಇಡಲಾಗಿದೆ ಎಂದು ಸ್ಪಷ್ಟಪಡಿಸಲಾಗಿದೆ.

****************

ಕೃಷಿ ಪಂಪ್‌ಸೆಟ್‌ಗಳಿಗೆ ಹಗಲಿನ ವೇಳೆಯೇ ಸಮರ್ಪಕ ವಿದ್ಯುತ್ ಪೂರೈಸಲು ನೆರವಾಗುವ ಫೀಡರ್ ಮಟ್ಟದ ಸೌರೀಕರಣ ಯೋಜನೆಯಾದ 'ಕುಸುಮ್-ಸಿ' ರಾಜ್ಯದಲ್ಲಿ ವೇಗ ಪಡೆಯುತ್ತಿದೆ. ಈ ಯೋಜನೆಯಿಂದ ರೈತರಿಗೆ ೭ ಗಂಟೆಗಳ ಕಾಲ ವಿದ್ಯುತ್ ನೀಡಲು ಸಾಧ್ಯವಾಗಲಿದೆ ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆಯ ಯಲಚಹಳ್ಳಿ ಕೆರೆ ಅಂಗಳದಲ್ಲಿ ಪಿಎಂ ಕುಸುಮ್-ಸಿ ಯೋಜನೆಯಡಿ ಸ್ಥಾಪಿಸಲಾದ ಸೌರ ಘಟಕ ಉದ್ಘಾಟಿಸಿ ಮಾತನಾಡಿದ ಅವರು, ಲೋಡ್ ಹೆಚ್ಚಳವಾಗಿ ಪೂರೈಕೆಯಲ್ಲಿ ಸಮಸ್ಯೆ ಸರಿಪಡಿಸುವ ಉದ್ದೇಶದಿಂದ ವಿದ್ಯುತ್ ಕೊರತೆ ನೀಗಿಸಲು ೧೨೦ ಹೊಸ ಸಬ್‌ಸ್ಟೇಷನ್‌ಗಳನ್ನು ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಹೊಸಕೋಟೆಯ ಈ ಘಟಕದಲ್ಲಿ ೭.೩ ಮೆಗಾವ್ಯಾಟ್ ವಿದ್ಯುತ್ ಉತ್ಪಾದನೆ ಆಗಲಿದ್ದು, ನಂದಗುಡಿ ಹೋಬಳಿಯ ಮುಗಬಾಳ ಗ್ರಾಮ ಪಂಚಾಯ್ತಿಯ ಒಟ್ಟು ೩೩ ಗ್ರಾಮಗಳ ಒಂದು ಸಾವಿರದ ೩೮೩ ಕೃಷಿ ಪಂಪ್ ಸೆಟ್‌ಗಳಿಗೆ ವಿದ್ಯುತ್ ಪೂರೈಕೆಯಾಗಲಿದೆ.

****************

ಭಾರತೀಯ ರಕ್ಷಣಾ ಸಂಶೋಧನಾ ಸಂಸ್ಥೆ, ದೀರ್ಘ ಶ್ರೇಣಿಯ ಕಣ್ಗಾವಲು ಉನ್ನತ ಕಾರ್ಯಕ್ಷಮತೆಯ ರಾಡಾರ್‌ಗಳು, ಸಂವೇದಕಗಳು ಹಾಗೂ ಉಪಗ್ರಹ ಆಧಾರಿತ ಪತ್ತೆಹಚ್ಚುವಿಕೆಯ ಮೇಲೆ ಕಾರ್ಯ ನಿರ್ವಹಿಸುತ್ತಿದೆ ಎಂದು ಡಿಆರ್‌ಡಿಒ ಮಹಾ ನಿರ್ದೇಶಕ ಡಾ. ಬಿ.ಕೆ. ದಾಸ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ಕೈಗಾರಿಕಾ ಪಾಲುದಾರರ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಾರತವು ಮುಂದುವರಿದ ಮಿಲಿಟರಿ ತಂತ್ರಜ್ಞಾನಗಳಲ್ಲಿ ಸಾಮರ್ಥ್ಯ ಹೊಂದಿರುವ ಉದಯೋನ್ಮುಖ ಶಕ್ತಿ ಎಂದು ಹೇಳಿದ್ದಾರೆ. ಕ್ಷಿಪಣಿಗಳು, ರಾಡಾರ್‌ಗಳು, ಸೆಮಿಕಂಡಕ್ಟರ್‌ಗಳು, ಲೇಸರ್ ಮತ್ತು ಡ್ರೋಣ್‌ಗಳ ಕ್ಷೇತ್ರಗಳಲ್ಲಿ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುವ ಮೂಲಕ ಡಿಆರ್‌ಡಿಒ, ರಕ್ಷಣಾ ವಲಯದಲ್ಲಿ ಆತ್ಮನಿರ್ಭರವಾಗಿ ಕಾರ್ಯ ನಿರ್ವಹಿಸುತ್ತಿದೆ. ಸೀಮಿತ ವ್ಯಾಪ್ತಿಯೊಂದಿಗೆ ಸುರಕ್ಷಾ ಕವಚದ ಹಂತ ಒಂದನ್ನು ಪರೀಕ್ಷಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

*****ಧ್ವನಿ**** ಡಾ. ಬಿ.ಕೆ. ದಾಸ್

****************

ನವೆಂಬರ್ ೨ರಂದು ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನ ಸಂಬಂಧ ಕಲಬುರಗಿ ಹೈಕೋರ್ಟ್ ವಿಭಾಗೀಯ ಪೀಠ ವಿಚಾರಣೆಯನ್ನು ಮತ್ತೆ ಮುಂದೂಡಿದೆ. ಚಿತ್ತಾಪುರದಲ್ಲಿ ಆರ್ ಎಸ್ ಎಸ್ ಪಥಸಂಚನಲಕ್ಕೆ ಅನುಮತಿ ಕೋರಿ ಸಲ್ಲಿಸಲಾಗಿದ್ದ ಅರ್ಜಿಯನ್ನು ಇಂದು ವಿಚಾರಣೆ ನಡೆಸಿದ ನ್ಯಾಯಾಲಯ ಮತ್ತೊಂದು ಶಾಂತಿ ಸಭೆ ಮಾಡಲು ಸೂಚಿಸಿದೆ. ನವೆಂಬರ್ ೫ರಂದು ಮಧ್ಯಾಹ್ನ ೩ ಗಂಟೆಗೆ ಬೆಂಗಳೂರಿನ ಅಡ್ವೊಕೇಟ್ ಜನರಲ್ ಕಚೇರಿಯಲ್ಲಿಯೇ ಶಾಂತಿಸಭೆ ನಡೆಸಲು ಸೂಚಿಸಿದ ನ್ಯಾಯಾಲಯ ವಿಚಾರಣೆಯನ್ನು ನವೆಂಬರ್ ೭ಕ್ಕೆ ಮುಂದೂಡಿದೆ. ಹೀಗಾಗಿ ನವೆಂಬರ್ ೨ರಂದು ಚಿತ್ತಾಪುರದಲ್ಲಿ ಪಥಸಂಚಲನ ನಡೆಸಲು ಮುಂದಾಗಿದ್ದ ಆರ್‌ಎಸ್‌ಎಸ್‌ಗೆ ಹಿನ್ನಡೆಯಾಗಿದೆ.

****************

ಬೆಂಗಳೂರಿನ ಶಾಸಕರ ಭವನದಲ್ಲಿ ಸ್ಮಾರ್ಟ್ ಲಾಕ್‌ಗಳ ಅಳವಡಿಕೆಯಲ್ಲಿ ನಡೆದಿದೆ ಎನ್ನಲಾದ ಭ್ರಷ್ಟಾಚಾರದ ಬಗ್ಗೆ ನ್ಯಾಯಾಂಗ ತನಿಖೆ ನಡೆಸುವಂತೆ ಬಿಜೆಪಿ ಒತ್ತಾಯಿಸಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ಶಾಸಕ ಎಸ್. ಮಂಜು ಇದೊಂದು ದೊಡ್ಡ ಹಗರಣವಾಗಿದೆ ಎಂದು ಆರೋಪಿಸಿದ್ದಾರೆ. ಕೂಡಲೇ ಸಭಾಧ್ಯಕ್ಷ ಯು.ಟಿ. ಖಾದರ್ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

****************

ಧರ್ಮಸ್ಥಳ ದೇವಾಲಯದ ಆಡಳಿತ ಮಂಡಳಿ ವಿರುದ್ಧ ಸಾಮೂಹಿಕ ಹತ್ಯೆ ಆರೋಪ ಹೊರಿಸಿದ್ದ ಮಹೇಶ್ ಶೆಟ್ಟಿ ತಿಮರೋಡಿ, ಗಿರೀಶ್ ಮಟ್ಟಣ್ಣನವರ್, ಟಿ. ಜಯಂತ್ ಮತ್ತು ವಿಠ್ಠಲ ಗೌಡ ಅವರು, ತಮ್ಮ ಮೇಲಿನ ಎಫ್‌ಐಆರ್ ರದ್ದುಗೊಳಿಸುವಂತೆ ಕೋರಿ ಹೈಕೋರ್ಟ್‌ಗೆ ರಿಟ್ ಅರ್ಜಿ ಸಲ್ಲಿಸಿದ್ದಾರೆ. ಪ್ರಕರಣದಲ್ಲಿ ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ಮತ್ತು ಎಸ್‌ಐಟಿಯ ಮುಖ್ಯ ತನಿಖಾಧಿಕಾರಿಯನ್ನು ಪ್ರತಿವಾದಿಗಳಾಗಿ ಹೆಸರಿಸಲಾಗಿದೆ. ಸಂವಿಧಾನದ ೨೨೬ ಮತ್ತು ೨೨೭ನೇ ವಿಧಿಯ ಅಡಿಯಲ್ಲಿ ಮತ್ತು ಬಿಎನ್‌ಎಸ್ ಕಾಯ್ದೆಯ ಸೆಕ್ಷನ್ ೫೨೮ರ ಅಡಿಯಲ್ಲಿ ರಿಟ್ ಅರ್ಜಿ ಸಲ್ಲಿಸಲಾಗಿದೆ.

****************

ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ನೇ ಜಯಂತಿ ಪ್ರಯುಕ್ತ ಏಕತಾ ಜಾಥಾ ಕಾರ್ಯಕ್ರಮವನ್ನು ನವೆಂಬರ್ ತಿಂಗಳಿನಲ್ಲಿ ಆಯೋಜಿಸಲಾಗುತ್ತದೆ ಎಂದು ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ ತಿಳಿಸಿದ್ದಾರೆ. ತುಮಕೂರು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ಪಾದಯಾತ್ರೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪಾದಯಾತ್ರೆಯ ಮೂಲಕ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ರಾಷ್ಟ್ರ ಏಕೀಕರಣದ ಪಾತ್ರ, ಸಾಹಸ, ಆಡಳಿತ ಹಾಗೂ ದೇಶಭಕ್ತಿಯ ಸಂದೇಶವನ್ನು ಯುವ ಪೀಳಿಗೆಗೆ ತಲುಪಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದ್ದಾರೆ.

****************

ದೇಶದಲ್ಲಿ ಭ್ರಷ್ಟಾಚಾರ ದೊಡ್ಡ ಪಿಡುಗಾಗಿದ್ದು ಇದರ ನಿರ್ಮೂಲನೆಗೆ ಈ ನಾಗರಿಕರು ಹಾಗೂ ನೌಕರರು ಕೈಜೋಡಿಸಬೇಕಿದೆ ಎಂದು ಲೋಕಾಯುಕ್ತ ನ್ಯಾಯಮೂರ್ತಿ ಬಿ. ವೀರಪ್ಪ ಕರೆ ನೀಡಿದ್ದಾರೆ. ಕೊಪ್ಪಳದಲ್ಲಿ ಸಾರ್ವಜನಿಕ ಅಹವಾಲು, ಕುಂದುಕೊರತೆ ದೂರು ವಿಚಾರಣೆ ಹಾಗೂ ಬಾಕಿ ಇರುವ ಪ್ರಕರಣಗಳ ವಿಲೇವಾರಿ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ವೈದ್ಯರು ಕೇಂದ್ರ ಸ್ಥಾನದಲ್ಲಿ ಇರುವಂತೆ ಜಿಲ್ಲಾ ಆರೋಗ್ಯ ಅಧಿಕಾರಿ ನಿರ್ದೇಶನ ನೀಡಬೇಕು ಎಂದು ಹೇಳಿದ್ದಾರೆ. ಜನರು ಸುಳ್ಳು ಪ್ರಕರಣಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ನೀಡುತ್ತಿದ್ದು, ಇದಕ್ಕೆ ಅವಕಾಶ ನೀಡಬಾರದು, ಸುಳ್ಳು ಪ್ರಕರಣಕ್ಕೆ ೬ ತಿಂಗಳಿಂದ ೩ ವರ್ಷಗಳವರೆಗೆ ಜೈಲು ಶಿಕ್ಷೆಯಾಗಲಿದೆ ಎಂದು ಎಚ್ಚರಿಕೆ ನೀಡಿದ್ದಾರೆ.

****************

ದಾವಣಗೆರೆ ವಿಶ್ವವಿದ್ಯಾನಿಲಯದ ಪ್ರಸಾರಾಂಗದ ವತಿಯಿಂದ ಸಂಶೋಧನಾ ಪ್ರಬಂಧಗಳನ್ನು ಪ್ರಕಟಿಸಲು ಮತ್ತು ಜಾಗತಿಕ ಮಟ್ಟದಲ್ಲಿ ಅವುಗಳ ಮೂಲಕ ಸಂಶೋಧನಾ ಕ್ಷೇತ್ರದಲ್ಲಿ ಗುರುತಿಸಿಕೊಳ್ಳಲು ಆದ್ಯತೆ ನೀಡಲಾಗುವುದು ಎಂದು ಕುಲಪತಿ ಪ್ರೊ.ಬಿ.ಡಿ.ಕುಂಬಾರ ತಿಳಿಸಿದ್ದಾರೆ. ವಿಶ್ವವಿದ್ಯಾನಿಲಯದ ಆವರಣದಲ್ಲಿ ಪ್ರಸಾರಾಂಗ ಕಚೇರಿ ಉದ್ಘಾಟಿಸಿ ಮಾತನಾಡಿದ ಅವರು, ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರು ನಡೆಸುವ ಸಂಶೋಧನೆಗಳನ್ನು ಜಾಗತಿಕ ಮಟ್ಟದಲ್ಲಿ ಗುರುತಿಸುವಂತೆ ಮಾಡುವ ಉದ್ದೇಶದಿಂದ ಸಂಶೋಧನಾ ಜರ್ನಲ್ ಆರಂಭಿಸಿ ಪ್ರಕಟಿಸಲು ಆದ್ಯತೆ ನೀಡಲಾಗುವುದು ಎಂದು ಹೇಳಿದ್ದಾರೆ.

****************

ರಾಸಾಯನಿಕಗಳ ಬಳಕೆ, ಸಸ್ಯರೋಗ ಮತ್ತು ಕೀಟ ನಿರ್ವಹಣೆ ಮುಂತಾದ ಸಮಗ್ರ ಕೃಷಿ ಪದ್ಧತಿ ಮೂಲಕ ಮೆಣಸಿನಕಾಯಿ ಬೆಳೆ ಬೆಳೆಯುವುದರಿಂದ ರೈತರು ಅಧಿಕ ಆದಾಯ ಪಡೆದುಕೊಳ್ಳಬಹುದಾಗಿದೆ ಎಂದು ಬಾಗಲಕೋಟೆ ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

****************